# ಪ್ರಸ್ತಾವನೆ

31 ಮಾರ್ಚ್ 2019ಕ್ಕೆ ಕೊನೆಗೊಂಡ ವರ್ಷದ ಭಾರತದ ಲೆಕ್ಕನಿಯಂತ್ರಕರು ಮತ್ತು ಮಹಾಲೆಕ್ಕಪರಿಶೋಧಕರ ಈ ವರದಿಯನ್ನು ಸಂವಿಧಾನದ ಅನುಚ್ಛೇದ 151(2)ರ ಅನ್ವಯ ರಾಜ್ಯ ವಿಧಾನಮಂಡಲದಲ್ಲಿ ಮಂಡಿಸುವುದಕ್ಕಾಗಿ ರಾಜ್ಯಪಾಲರಿಗೆ ಸಲ್ಲಿಸಲು ತಯಾರಿಸಲಾಗಿದೆ.

ಕಾಲೇಜು ಶಿಕ್ಷಣ, ಆರೋಗ್ಯ ಮತ್ತು ಕುಟುಂಬ ಕಲ್ಯಾಣ ಸೇವೆಗಳು, ವಸತಿ, ಕಾರ್ಮಿಕ, ವೈದ್ಯಕೀಯ ಶಿಕ್ಷಣ, ಕಂದಾಯ, ಗ್ರಾಮೀಣಾಭಿವೃದ್ಧಿ ಹಾಗೂ ಪಂಚಾಯತ್‌ರಾಜ್ ಮತ್ತು ನಗರಾಭಿವೃದ್ಧಿ ಇಲಾಖೆಗಳನ್ನು ಒಳಗೊಂಡಂತೆ ಸಾಮಾನ್ಯ ಮತ್ತು ಸಾಮಾಜಿಕ ಸೇವೆಗಳಡಿಯಲ್ಲಿನ ಕರ್ನಾಟಕ ಸರ್ಕಾರದ ಇಲಾಖೆಗಳ ಮತ್ತು ಇಲಾಖೆಗಳ ಸ್ವಾಯತ್ತ ಸಂಸ್ಥೆಗಳ ಕಾರ್ಯನಿರ್ವಹಣಾ ಲೆಕ್ಕಪರಿಶೋಧನೆ ಮತ್ತು ಅನುಪಾಲನಾ ಲೆಕ್ಕಪರಿಶೋಧನೆಯ ಪ್ರಮುಖವಾದ ಫಲಿತಾಂಶಗಳನ್ನು ಈ ವರದಿಯು ಒಳಗೊಂಡಿದೆ.

ಈ ವರದಿಯಲ್ಲಿ ತಿಳಿಸಿರುವ ಪ್ರಕರಣಗಳು 2018–19ರ ವರ್ಷದಲ್ಲಿ ಲೆಕ್ಕಪತ್ರಗಳ ಪರೀಕ್ಷಾ–ತನಿಖೆಯ ಸಮಯದಲ್ಲಿ ಗಮನಕ್ಕೆ ಬಂದವುಗಳೇ ಅಲ್ಲದೆ ಅದಕ್ಕಿಂತ ಮುಂಚಿನ ವರ್ಷಗಳಲ್ಲಿ ಗಮನಿಸಿದ್ದಾದರೂ ಹಿಂದಿನ ವರದಿಗಳಲ್ಲಿ ಸೇರಿಸಲಾಗಿದೇ ಇರುವಂತಹವುಗಳಾಗಿವೆ. 2018–19ರ ತರುವಾಯದ ಅವಧಿಗೆ ಸಂಬಂಧಿಸಿದ ವಿಷಯಗಳನ್ನೂ ಕೂಡ, ಅವಶ್ಯವಿದ್ದೆಡೆಯಲ್ಲಿ, ಸೇರಿಸಲಾಗಿದೆ.

ಭಾರತದ ಲೆಕ್ಕನಿಯಂತ್ರಕರು ಮತ್ತು ಮಹಾಲೆಕ್ಕಪರಿಶೋಧಕರು ಜಾರಿ ಮಾಡಿರುವ ಲೆಕ್ಕಪರಿಶೋಧನಾ ಮಾನದಂಡಗಳಿಗೆ ಅನುಗುಣವಾಗಿ ಲೆಕ್ಕಪರಿಶೋಧನೆಯನ್ನು ಕೈಗೊಳ್ಳಲಾಗಿದೆ.

ಈ ಭಾಷಾಂತರಿಸಿದ ಆವೃತ್ತಿಯಲ್ಲಿನ ಯಾವುದೇ ಸಂದೇಹಗಳಿಗೆ ಆಂಗ್ಲ ಭಾಷಾ ಆವೃತ್ತಿಯೇ ಅಧಿಕೃತವೆಂದು ಪರಿಗಣಿಸಬೇಕು.